ಅಧ್ಯಕ್ಷರು:– ಪ್ರಸ್ತಾವನವನ್ನು ಮಂಡಿಸಲಾಯಿತು. ಈಗ ಅದನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವನೆ ಹೀಗಿದೆ, 2014ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿಯನ್ನು ನೀಡಬೇಕು.

ಪ್ರಸ್ತಾವದ ಪರವಾಗಿರುವವರು ಹೌದು ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು ಇಲ್ಲ ಎಂದು ಸೂಚಿಸಬೇಕು

ಪ್ರಸ್ತಾವವು ಹೌದು ಎನ್ನುವವರ ಪರವಾಗಿದೆಯೆಂದು ಭಾವಿಸುತ್ತೇನೆ

ಪ್ರಸ್ತಾವವು ಹೌದು ಎನ್ನುವವರ ಪರವಾಗಿದೆ

ಪ್ರಸ್ತಾವವು ಹೌದು ಎನ್ನುವವರ ಪರವಾಗಿದೆ

ಪ್ರಸ್ತಾವವು ಹೌದು ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಅಧ್ಯಕ್ಷರು:– ವಿಧೇಯಕವನ್ನು ಮಂಡಿಸಲಾಯಿತು.

(ಈ ಹಂತದಲ್ಲಿ ಬಿ.ಜೆ.ಪಿ ಸದಸ್ಯರು ಸದನದ ಬಾವಿಯಲ್ಲಿ ಘೋಷಣೆಗಳನ್ನು ಕೂಗುತ್ತಾ ಧರಣಿಯಲ್ಲಿ ನಿರತರಾಗಿದ್ದರು)

ಆ. ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಪರ್ಯಾಲೋಚನಾ ಪ್ರಸ್ತಾವ

ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2014

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು):– ಮಾನ್ಯ ಅಧ್ಯಕ್ಷರೆ, ಬಗರ್‌ಹುಕುಂ ಸಾಗುವಳಿ ಸಮಿತಿಗೆ (ಗೊಂದಲ).....ವಿಲೇವಾರಿಗೆ ಸಂಬಂಧಿಸಿದಂತೆ 2016ರವರೆಗೆ ಪ್ರಸ್ತಾವನೆ (ಗೊಂದಲ)....ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2014ಅನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.